ಪ್ರಾಥಮಿಕ ಆರೋಗ್ಯ ಕೇಂದ್ರಗಳ ವಿವರ

286 (403)

ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ)

1) ಬೀದರ್ ಜಿಲ್ಲೆ ಭಾಲ್ಕಿ ತಾಲ್ಲೂಕಿನಲ್ಲಿ ಕಳೆದ 3 ವರ್ಷಗಳಲ್ಲಿ ಎಷ್ಟು ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಪ್ರಾರಂಭವಾಗಿವೆ;

2) ಈ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಅವಶ್ಯಕತೆ ಇರುವ ಹುದ್ದೆಗಳನ್ನು ಮಂಜೂರು ಮಾಡಲಾಗಿದೆಯೇ;

3) ಹುದ್ದೆಗಳನ್ನು ಮಂಜೂರು ಮಾಡದೇ ಇರುವುದರಿಂದ ಆರೋಗ್ಯ ಕೇಂದ್ರಗಳು ಸಮರ್ಪಕವಾಗಿ ಸೇವೆ ಸಲ್ಲಿಸಲು ಸಾಧ್ಯವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

4) ಹಾಗಿದ್ದಲ್ಲಿ, ಈಗಲಾದರೂ ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ಕ್ರಮ ಜರುಗಿಸುವುದೇ?

ಶ್ರೀ ಅರವಿಂದ ಲಿಂಬಾವಳಿ

(ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

1) ಬೀದರ್ ಜಿಲ್ಲೆ ಭಾಲ್ಕಿ ತಾಲ್ಲೂಕಿನಲ್ಲಿ ಕಳೆದ 3 ವರ್ಷಗಳಲ್ಲಿ 3 ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಪ್ರಾರಂಭವಾಗಿದೆ.

2) ಈ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಅವಶ್ಯಕ ಹುದ್ದೆಗಳನ್ನು ಮಂಜೂರು ಮಾಡಲಾಗಿದೆ.

3) ಉದ್ಭವಿಸುವುದಿಲ್ಲ.

4) ಉದ್ಭವಿಸುವುದಿಲ್ಲ.

ಮಾಜಿ ಸೈನಿಕರ ಮಕ್ಕಳ ವಿದ್ಯಾರ್ಥಿ ವೇತನ

328 : (242)

ಶ್ರೀ ವಸಂತಬಂಗೇರ.ಕೆ(ಬೆಳ್ತಂಗಡಿ)

ಅ) ಬೀಡಿ ಕಾರ್ಮಿಕರ ಮಕ್ಕಳಿಗೆ ರೂ. 1500/-ಗಳ ವಿದ್ಯಾರ್ಥಿ ವೇತನ ಮತ್ತು ಮಾಜಿ ಸೈನಿಕರ ಮಕ್ಕಳಿಗೆ ರೂ. 135/-ಗಳ ವಿದ್ಯಾರ್ಥಿ ವೇತನ ನೀಡಲಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;